ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **889 /2022**

| | | |
|---|---|---|
| ಸಾಕ್ಷಿಯ ಹೆಸರು | : ಸಂತೋಷ | ಸಿ.ಡಬ್ಲ್ಯು 3 |
| ತಂದೆಯ ಹೆಸರು | : ಸಂಗೋಡನ್ | ಪಿ.ಡಬ್ಲ್ಯು 2 |
| ವಯಸ್ಸು | : 42 ವರ್ಷ | |
| ಉದ್ಯೋಗ | : ವ್ಯಾಪಾರ | |
| ವಾಸ ಸ್ಥಳ | : ಭದ್ರಾವತಿ | |

ದಿನಾಂಕಃ**02-12-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನನಗೆ ಚಾಸಾ-1, 2 ಮತ್ತು ಮೃತ ಮೂರ್ತಿ ಇವರ ಪರಿಚಯ ಇರುತ್ತದೆ. ನನ್ನ ಸಹಿಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯ ಸಹಿ ಇರುವ ದಾಖಲೆ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿ.ಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ -2(ಬಿ) ಎಂದು ಗುರುತಿಸಲಾಯಿತು. ಅಪಘಾತವಾದ ಸ್ಥಳದಲ್ಲಿ ನಿ.ಪಿ-3 ಮತ್ತು 4 ಪೊಟೋಗಳನ್ನು ತೆಗೆದಿರುತ್ತಾರೆ. ಮೂರ್ತಿಯವರು ಭದ್ರಾವತಿ ಕಡೆಯಿಂದ ತರೀಕೆರೆ ಕಡೆಗೆ ಅಪಘಾತದ ಸಮಯದಲ್ಲಿ ಓಮಿನಿ ಕಾರಿನಲ್ಲಿ ಪ್ರಯಾಣ ಮಾಡುತ್ತಿದ್ದರು. ತರೀಕೆರೆಯಿಂದ ಶಿವಮೊಗ್ಗದ ಕಡೆಗೆ ಹೋಗುವ ಬಸ್ಸಿನಿಂದ ಅಪಘಾತ ಆಗಿರುತ್ತದೆ. ನಿ.ಪಿ-5 ರ ಮೇಲಿನ ಸಹಿಯನ್ನು ನಿ.ಪಿ-5(ಬಿ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ಎರಡು ಗಾಡಿಗಳನ್ನು ಅಂದರೆ ನಿ.ಪಿ-6 ರಿಂದ 8 ಪೊಟೋದಲ್ಲಿ ಕಾಣಿಸುವ ವಾಹನಗಳನ್ನು ಜಪ್ತಿಪಡಿಸಿಕೊಂಡರು.

ಪಾಟೀ ಸವಾಲುಃ ಆರೋಪಿ ಪರ ವಕೀಲರವರಿಂದಃ

ನಿ.ಪಿ-2 ಮತ್ತು 5 ರಲ್ಲಿ ಬರೆದಿರುವ ಸಂಗತಿಗಳು ನನಗೆ ತಿಳಿದಿರುವುದಿಲ್ಲ. ಪೊಲೀಸರು ಸಹಿ ಮಾಡು ಎಂದ ಕಾರಣ ಮಾಡಿದ್ದೇನೆ ಎಂದರೆ ಸರಿ. ನಾನು ಮತ್ತು ಮೃತ ಮೂರ್ತಿ ರವರು ಒಂದೇ ಜಾತಿಗೆ ಸೇರಿದವರು ಎಂದರೆ ಸರಿ. ಒಂದೇ ವೃತ್ತಿ ಮಾಡುತ್ತೇವೆ ಎಂದರೆ ಸರಿ. ಆ ಕಾರಣಕ್ಕೆ ಸುಳ್ಳು ಹೇಳತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಗಳನ್ನು ಮಾಡಿಲ್ಲ ಮತ್ತು ಯಾವುದೇ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ, ಮೃತರ ಕುಟುಂಬಕ್ಕೆ ಪರಿಹಾರ ಕೊಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇರುವುದಿಲ್ಲ .

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.